67 (145) ಶ್ರೀ ರಾಜೇಂದ್ರನ್ ಎಸ್. : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಕಾನೂನು, ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಾನೂನು ಇಲಾಖೆಯಲ್ಲಿ ಒಂದು ವರ್ಷಕ್ಕೂ ಹೆಚ್ಚು ಕಾಲ ಅಭಿಪ್ರಾಯಕ್ಕಾಗಿ ಬಾಕಿ ಉಳಿದಿರುವ ಕಡತಗಳು ಎಷ್ಟು: (ವಿವರ ನೀಡುವುದು)

ಆ) ವಿಳಂಬಕ್ಕೆ ಕಾರಣಗಳೇನು? ಮತ್ತು ಕಡತಗಳನ್ನು ಯಾವಾಗ ವಿಲೇವಾರಿ ಮಾಡಲಾಗುವುದು?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಕಾನೂನು, ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) ಅಂತಹ 9 ಕಡತಗಳಿದ್ದು ಅವುಗಳ ವಿವರ ಈ ಕೆಳಗಿನಂತಿದೆ :–

ಲಾ	702	ಅಭಿ	04
ಲಾ	838	ಅಭಿ	04
ಲಾ	853	ಅಭಿ	04
ಲಾ	95	ಅಭಿ	05
ಲಾ	115	ಅಭಿ	05
ಲಾ	122	ಅಭಿ	05
ಲಾ	194	ಅಭಿ	05
ಲಾ	201	ಅಭಿ	05
ಲಾ	212	ಅಭಿ	05

ಆ) ಸದರಿ ಕಡತಗಳಲ್ಲಿ ಸಂಬಂಧಪಟ್ಟ ಆಡಳಿತ ಇಲಾಖೆಗಳೊಂದಿಗೆ ಸಮಾಲೋಚಿಸಲಾಗುತ್ತಿದ್ದು, ಅವುಗಳನ್ನು ಆದ್ಯತೆಯ ಮೇಲೆ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

68 (146) ಶ್ರೀ ರಾಜೇಂದ್ರನ್ ಎಸ್. (ಕೆ.ಜಿ.ಎಫ್): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿಕ್ಷಣ ಇಲಾಖೆಯಲ್ಲಿ ಅನುದಾನಿತ / ಅನುದಾನರಹಿತ ಕಾಲೇಜುಗಳು ಸೇರಿದಂತೆ ಗುರುತಿಸಲ್ಪಟ್ಟ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ;

ಆ) ಈ ಹುದ್ದೆಗಳನ್ನು ತುಂಬದೇ ಇರಲು ಕಾರಣಗಳೇನು?

ಇ) ಸರ್ಕಾರವು ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡುತ್ತದೆ?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಯ ವಿವರಗಳು ಇಂತಿವೆ.

1) ಸರ್ಕಾರಿ ಪ್ರಾಥಮಿಕ – 2094
2) ಅನುದಾನಿತ ಪ್ರೌಢಶಾಲೆ – 174
3) ಸರ್ಕಾರಿ ಪ್ರೌಢಶಾಲೆ – ಇಲ್ಲ
4) ಅನುದಾನಿತ ಪ್ರೌಢಶಾಲೆ – 450
5) ಸರ್ಕಾರಿ ಪ.ಪೂ.ಕಾಲೇಜು – 26
6) ಅನುದಾನಿತ ಪ.ಪೂ.ಕಾಲೇಜು – 377

ಈ ಪೈಕಿ ಸರ್ಕಾರಿ ಪ್ರಾಥಮಿಕ ಶಾಲೆಯ 2094 ಹುದ್ದೆಗಳು, ಅನುದಾನಿತ ಪ್ರಾಥಮಿಕ ಶಾಲೆಯ 72 ಹುದ್ದೆಗಳು, ಅನುದಾನಿದ ಪ್ರೌಢಶಾಲೆಯ 428 ಹುದ್ದೆಗಳು, ಸರ್ಕಾರಿ, ಅನುದಾನಿತ ಪದವಿ ಪೂರ್ವ ಕಾಲೇಜುಗಳ 152 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಉಳಿದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.

ಆ) ಅನುದಾನಿತ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳು ಸೇರಿದಂತೆ ಒಟ್ಟು 275 ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಬೇಕಾಗಿದೆ. ಈ ಹುದ್ದೆಗಳು ಉದ್ಭವವಾದೊಡನೆ ಭರ್ತಿ ಮಾಡಲು ಸಂಬಂಧಿಸಿದ ಆಡಳಿತ ಮಂಡಳಿಗೆ ಸೂಚಿಸಿದೆ. ಪದವಿ ಪೂರ್ವ ಕಾಲೇಜುಗಳಲ್ಲಿ 02 ಪರಿಶಿಷ್ಟ ಪಂಗಡದ ಭೌತಶಾಸ್ತ್ರ ಉಪನ್ಯಾಸಕ ಹುದ್ದೆಗಳಿಗೆ ಸೂಕ್ತ ಅಭ್ಯರ್ಥಿಗಳು ಸಿಗುತ್ತಿಲ್ಲವೆಂದು ಆಡಳಿತ ಮಂಡಳಿ ತಿಳಿಸಿದೆ. ಆದಾಗ್ಯೂ ಈ ಹುದ್ದೆಗಳನ್ನು ಪದೇ ಪದೇ ಜಾಹಿರಾತು ನೀಡುವ ಮೂಲಕ ಕೂಡಲೇ ತುಂಬಿಕೊಳ್ಳಲು ಸೂಚಿಸಿದೆ. ಈ ಹುದ್ದೆಗಳನ್ನು ಆಡಳಿತ ಮಂಡಳಿ ತುಂಬಿಕೊಂಡ ನಂತರ ನೇಮಕಾತಿಗಳು ನಿಯಮಾನುಸಾರವಿದ್ದಲ್ಲಿ ಪರಿಶೀಲಿಸಿ ಅನುಮೋದನೆ ನೀಡಲಾಗುವುದು.

69 (148) ಶ್ರೀ ರಾಜೇಂದ್ರನ್ ಎಸ್. (ಕೆ.ಜಿ.ಎಫ್): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಎ) ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಅಧಿಕಾರಿಗಳು/ನೌಕರರು ಅಕ್ರಮ, ಅವ್ಯವಹಾರ, ಹಣ ದುರುಪಯೋಗ, ದುರಾಡಳಿತ ಎಸಗಿರುವ ಪ್ರಕರಣಗಳು (ಜಿ.ಪಂ., ತಾ.ಪಂ., ಮತ್ತು ಗ್ರಾ.ಪಂ. ವಾರು ಮೊತ್ತ ವಿವರಗಳನ್ನು ನೀಡುವುದು.)

ಬಿ) ಮೇಲ್ಕಂಡ ಅವ್ಯವಹಾರಗಳಲ್ಲಿ ಒಳಗೊಂಡಿರುವ ಅಧಿಕಾರಿ ಮತ್ತು ನೌಕರರುಗಳ ವಿವರಗಳನ್ನು ನೀಡುವುದು.

ಸಿ) ತಪ್ಪಿತಸ್ಥ ನೌಕರರುಗಳ ವಿರುದ್ಧ ದುರುಪಯೋಗವಾಗಿರುವ ಮೊತ್ತವನ್ನು ವಸೂಲು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಎ) ವಿವರಗಳನ್ನು ಅನುಬಂಧ–2ರಲ್ಲಿ ನೀಡಲಾಗಿದೆ.

ಬಿ) ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಸಿ) ಆಪಾದಿತ ಅಧಿಕಾರಿ/ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಿದೆ/ನಡೆಸಲಾಗುತ್ತಿದೆ. ತಪ್ಪಿತಸ್ಥರೆಂದು ಸಾಬೀತಾದ ಪ್ರಕರಣಗಳಲ್ಲಿ ಸರ್ಕಾರಕ್ಕೆ ಉಂಟಾದ ನಷ್ಟವನ್ನು ಅವರುಗಳಿಂದ ವಸೂಲು ಮಾಡಲು ಮತ್ತು ದಂಡನೆ ವಿಧಿಸಲು ಕ್ರಮ ಕೈಗೊಳ್ಳಲಾಗಿದೆ. ಉಳಿದಂತೆ, ವಿಚಾರಣಾ ವರದಿಗಳು ಬಂದ ನಂತರ ಕ್ರಮ ಕೈಗೊಳ್ಳಲಾಗುವುದು. (ಜಿಲ್ಲಾವಾರು ವಿವರಗಳನ್ನು ಲಗತ್ತಿಸಿರುವ ಅನುಬಂಧಗಳಲ್ಲಿ ನೀಡಲಾಗಿದೆ.)